# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ  E-mail : kannadapostnews@gmail.com  / ಕನ್ನಡ post  Price: ₹1

Vol.No.01 | Issue. 287 | Pages. 2 | Date: 07-10-2025, TUESDAY  RNI NO: KARKAN/2024/89601  Kannada Daily

ಸಂಪುಟ : 01 - ಸಂಚಿಕೆ : 287 - ಪುಟಗಳು : 2  07-10-2025 ಮಂಗಳವಾರ  Ph: 8762954248  ದರ : ₹1


# ಹಾಸನಾಂಬ: ಜನಸ್ನೇಹಿ ಉತ್ಸವಕ್ಕೆ ಸರ್ಕಾರದ ಕ್ರಮ

## ಗಣ್ಯ ವ್ಯಕ್ತಿಗಳು ದರ್ಶನಕ್ಕೆ ಬರುವ ಮಾಹಿತಿ ಮೊದಲೇ ನೀಡಬೇಕು: ಸಚಿವ ಕೃಷ್ಣಬೈರೇಗೌಡ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೆಂಗಳೂರು : ನಾಡಿನ ವಿಖ್ಯಾತ ಹಾಸನಾಂಭ ಉತ್ಸವದಲ್ಲಿ ಪ್ರಸ್ತುತ ವರ್ಷದಿಂದ ವಿಐಪಿ ಸಂಪ್ರದಾಯಕ್ಕೆ ಬ್ರೇಕ್ ನೀಡಿ ಜನಸ್ನೇಹಿ ಉತ್ಸವಕ್ಕೆ ಕರೆ ನೀಡಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ವಿಕಾಸಸೌಧದಲ್ಲಿ ಸೋಮವಾರ ಹಾಸನ ಜಿಲ್ಲೆಯ ಶಾಸಕರು ಸಂಸದರು ಹಾಗೂ ಅಧಿಕಾರಿಗಳು ಜೊತೆ ಸಭೆ ನಡೆಸಿ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಾಸನಾಂಭ ಉತ್ಸವದಲ್ಲಿ ವಿಐಪಿ ಸಂಸ್ಕೃತಿಯಿಂದ ಸ್ಥಳೀಯರು ಬೇಸತ್ತಿದ್ದು, ಈ ವರ್ಷದಿಂದ ಈ ಸಂಸ್ಕೃತಿಕ ತಿಲಾಂಜಲಿ ಹಾಡಲಾಗುವುದು. ಅಲ್ಲದೆ, ಜನಸ್ನೇಹಿ ಹಾಸನಾಂಭ ಉತ್ಸವಕ್ಕೆ ಕರೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಕಳೆದ ವರ್ಷ ಹಾಸನದಲ್ಲಿ ವಿಐಪಿ ಗಳ ಎಸ್ಕಾರ್ಟ್‌ಗಳದ್ದೇ ಸದ್ದು ಹೆಚ್ಚಾಗಿತ್ತು. ಆದರೆ, ಈ ವರ್ಷ ಇದಕ್ಕೆ ಅವಕಾಶ ನೀಡಲಾಗುವುದಿಲ್ಲ. ರಾಜ್ಯಪಾಲರು, ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಗೃಹ ಸಚಿವರು, ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳು ಹಾಗೂ ಮಾಜಿ ಪ್ರಧಾನಿಗಳಿಗೆ ಮಾತ್ರ ಎಸ್ಕಾರ್ಟ್ ವ್ಯವಸ್ಥೆ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಮುಂದುವರೆದು, ಶಾಸಕರು, ಸಚಿವರು ನ್ಯಾಯಾಧೀಶರು, ಕ್ರೀಡಾಪಟುಗಳು, ಸಿನಿಮಾ ತಾರೆಯರು ಸೇರಿದಂತೆ ಉಳಿದ ಗಣ್ಯ ವ್ಯಕ್ತಿಗಳು ತಾವು ದೇವಾಲಯಕ್ಕೆ ಭೇಟಿ ನೀಡುವ ಬಗ್ಗೆ ಇ-ಮೇಲ್ ಅಥವಾ ಫೋನ್ ಕರೆಗಳ ಮೂಲಕ ಮೊದಲೇ ತಿಳಿಸಬೇಕು.

ಮಾಹಿತಿ ನೀಡುವ ಗಣ್ಯವ್ಯಕ್ತಿಗಳನ್ನು ಜಿಲ್ಲಾಡಳಿತ ಏರ್ಪಡಿಸಿರುವ ವಾಹನದಲ್ಲಿ ದೇವಾಲಯಕ್ಕೆ ಕರೆತಂದು ದೇವರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುವುದು. ಗಣ್ಯ ವ್ಯಕ್ತಿಗಳಿಗೆ ತಮ್ಮ ಕುಟುಂಬದ ನಾಲ್ಕು ಜನ ಸದಸ್ಯರನ್ನು ಜೊತೆಗೆ ಕರೆತರಲು ಅವಕಾಶ ನೀಡಲಾಗಿದೆ. ಆದರೆ, ಯಾವುದೇ ಖಾಸಗಿ ವಾಹನಗಳ ಮೂಲಕ ದೇವಾಲಯಕ್ಕೆ ಆಗಮಿಸಲು ಅವಕಾಶ ಇಲ್ಲ ಎಂದು ಅವರು ತಿಳಿಸಿದರು.

ಇದಲ್ಲದೆ, 1000 ರೂ ಹಾಗೂ 300 ರೂ ಬೆಲೆಯ ಪಾಸ್ಗಳನ್ನೂ ವಿತರಿಸಲಾಗುವುದು. ಪಾಸ್ ಪಡೆದವರಿಗೆ ದೇವರ ದರ್ಶನದ ಜೊತೆಗೆ ಪ್ರಸಾದವನ್ನೂ ನೀಡಲಾಗುವುದು. ಒಂದು ಪಾಸ್ಗೆ ಒಬ್ಬರಿಗೆ ಮಾತ್ರ ಅವಕಾಶ ಇರಲಿದೆ. ಎಸ್ಕಾರ್ಟ್‌ನಲ್ಲಿ ಆಗಮಿಸುವವರಿಗೆ ಬೆಳಗ್ಗೆ 10.30 ರಿಂದ 12.30ರ ವರೆಗೆ ಅವಕಾಶ ಇರಲಿದೆ. ಪಾಸ್ ಪಡೆದವರಿಗೆ ಬೆಳಗ್ಗೆ 7.30 ರಿಂದ 10ರ ನಡುವೆ ಪ್ರವೇಶ ನೀಡಲಾಗುವುದು. ಒಂದು ದಿನಕ್ಕೆ 1000 ಪಾಸ್ಗಳನ್ನು ಮಾತ್ರ ವಿತರಿಸಲಿದ್ದು, ಸಮಯ ಮೀರಿ ಬಂದವರಿಗೆ ಅವಕಾಶ ಇರುವುದಿಲ್ಲ. ಇದಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

### ಭದ್ರತೆಗೆ ಒತ್ತು

ಜನ ಸಂದಣಿ ನಿಯತ್ರಿಸುವ ಸಲುವಾಗಿ 2000 ಪೊಲೀಸರನ್ನು ನೇಮಕ ಮಾಡಲಾಗಿದೆ.

280 ಕ್ಕೂ ಹೆಚ್ಚು ಸಿಸಿಟಿವಿ ಅಳವಡಿಸಲಾಗಿದೆ. ಡ್ರೋನ್ ಕ್ಯಾಮೆರಾ ಸಹ ಬಳಕೆಯ ಲ್ಲಿದ್ದು, ಎಲ್ಲವಕ್ಕೂ ಎಐ ತಂತ್ರಜ್ಞಾನ ಬಳಸಲಾಗಿದೆ. ಸ್ಥಳದಲ್ಲೇ ಕಂಟ್ರೋಲ್ ರೂಂ ನಿರ್ಮಿಸಿದ್ದು, ಯಾವುದೇ ಅಹಿತಕರ ಘಟನೆ ನಡೆಯಲು ಆಸ್ಪದ ನೀಡಲಾಗುವುದಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.



### ದೇವಾಲಯಕ್ಕೆ ಭೇಟಿ ನೀಡುವವರ ಸಂಖ್ಯೆ ಗಣನೀಯ ಹೆಚ್ಚಳ

ಹಾಸನಾಂಭ ದೇವಾಲಯಕ್ಕೆ 2021 ರಲ್ಲಿ 1ಲಕ್ಷ ಜನ ಮಾತ್ರ ಭೇಟಿ ನೀಡಿದ್ದರು. ಆದರೆ, 2022 ರಲ್ಲಿ 3 ಲಕ್ಷ ಹಾಗೂ 2023 ರಲ್ಲಿ 6 ಲಕ್ಷ ಜನ ಭೇಟಿ ನೀಡಿದ್ದಾರೆ.

ಕಳೆದ ವರ್ಷ 20 ಲಕ್ಷ ಜನ ಭೇಟಿ ನೀಡಿದ್ದಾರೆ. ಹೀಗಾಗಿ ಈ ವರ್ಷ 25ಲಕ್ಷ ಜನ ದೇವಿಯ ದರ್ಶನಕ್ಕೆ ಆಗಮಿಸುವ ನಿರೀಕ್ಷೆ ಇದೆ. ಹೀಗಾಗಿ ಎಲ್ಲಾ ಇಲಾಖೆಯನ್ನೂ ಒಳಗೊಂಡು ಸುಗಮ ತಯಾರಿಗೆ ಜಿಲ್ಲಾಡಳಿತ ಎಲ್ಲಾ ರೀತಿಯ ಸಿದ್ದತೆ ಮಾಡಿಕೊಂಡಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಮಾಹಿತಿ ನೀಡಿದರು.

### ಈ ಬಾರಿ ಇರಲಿದೆ ಸಾಂಸ್ಕೃತಿಕ ಕಾರ್ಯಕ್ರಮ

ಅಕ್ಟೋಬರ್ 9 ರಿಂದಲೇ ಈ ಬಾರಿ ಸಾಂಸ್ಕೃತಿಕ ಕಾರ್ಯಕ್ರಮಗಳೂ ಇರಲಿವೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಈ ಬಗ್ಗೆ ಮಾಹಿತಿ ನೀಡಿದ ಅವರು, ಮೂರು ವೇದಿಕೆ ಸಿದ್ದಪಡಿಸಲಾಗಿದ್ದು, ಒಂದು ವೇದಿಕೆಯಲ್ಲಿ ಜಾನಪದ ಜಾತ್ರೆ ನಡೆಸಲಾಗುವುದು.

ಈ ವೇದಿಕೆಯಲ್ಲಿ ನಾಡಿನ ನಾನಾ ಭಾಗದ ಜಾನಪದ ಕಲಾವಿದರು ಆಗಮಿಸಿ ನೃತ್ಯ ಪ್ರದರ್ಶಿಸಲಿದ್ದಾರೆ. ಜಾನಪದವನ್ನು ಉಳಿಸಿ ಬೆಳೆಸುವ ಹಾಗೂ ಕಲಾವಿದರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ಯೋಜನೆ ಹಮ್ಮಿಕೊಳ್ಳಲಾಗಿದ್ದು, ಉಳಿದ ಎರಡು ವೇದಿಕೆಯಲ್ಲಿ ಸ್ಥಳೀಯ ಯುವಕ-ಯುವತಿಯರು ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ಭಕ್ತಾದಿಗಳಿಗೆ ಈ ವರ್ಷ ನೂತನ ಅನುಭವವಾಗಲಿದೆ.

ಇದರ ಜೊತೆಗೆ ಟೆಲಿ ಟೂರಿಸಂ, ಫಲಪುಷ್ಪ ಪ್ರದರ್ಶನವೂ ಇರಲಿದೆ, ಸ್ತ್ರೀಶಕ್ತಿ ಸಂಘಗಳಿಂದ ಕರಕುಶಲ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮೇಳವನ್ನೂ ಏರ್ಪಡಿಸಲಾಗಿದೆ. ಪ್ರವಾಸೋದ್ಯಮ ಇಲಾಖೆ ಜೊತೆಗೆ ಮಾತನಾಡಿದ್ದು ಹಾಸನಾಂಭ ಟೂರ್ ಪ್ಯಾಕೇಜ್ ಸಹ ಆರಂಭಿಸುವ ಇರಾದೆ ಇದೆ ಎಂದರು.



## ಮಲಬಾರ್ ಗೋಲ್ಡ್ ಕಟ್ಟಡದಿಂದ ಬಿದ್ದು ಎಲೆಕ್ಟ್ರೀಷಿಯನ್ ಸಾವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಮಲಬಾರ್ ಗೋಲ್ಡ್ ಆಭರಣ ಮಳಿಗೆಯ ಮಹಡಿಯಿಂದ ಬಿದ್ದು ಎಲೆಕ್ಟ್ರೀಷಿಯನ್ ಒಬ್ಬರು ಮೃತಪಟ್ಟಿದ್ದಾರೆ.

ಆಲೂರು ತಾಲೂಕು ಮಗ್ಗೆ ನಿವಾಸಿ ರವೀಂದ್ರ (52) ಮೃತ ವ್ಯಕ್ತಿ. ಇವರು ಆಭರಣ ಮಳಿಗೆಯಲ್ಲಿ ಎಲೆಕ್ಟ್ರೀಷಿಯನ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು ಎನ್ನಲಾಗಿದೆ.

ಇಂದು ಸಂಜೆ ಎರಡನೇ ಮಹಡಿಯ ಮೇಲೆ ವಿದ್ಯುತ್ ಸಂಬಂಧಿತ ಕೆಲಸ ಮಾಡುತ್ತಿದ್ದಾಗ ಆಯತಪ್ಪಿ ಕೆಳಗೆ ಬಿದ್ದಿದ್ದಾರೆ. ತಲೆಗೆ ತೀವ್ರ ಪೆಟ್ಟಾಗಿ ಪ್ರಜ್ಞಾ ಶೂನ್ಯರಾದ ಅವರನ್ನು ಹಿಮ್ಸ್ ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಪ್ರಾಣ ಪಕ್ಷಿ ಹಾರಿ ಹೋಗಿತ್ತು.

ಮೃತರಿಗೆ ಪತ್ನಿ, ಇಬ್ಬರು ಮಕ್ಕಳಿದ್ದಾರೆ. ನಗರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಹಾಸನಾಂಬ ಜಾತ್ರಾ ಮಹೋತ್ಸವ ಪ್ಯಾಕೇಜ್ ಪ್ರವಾಸಕ್ಕೆ ಹೊಸ ತಾಣಗಳು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು, : ಹಾಸನಾಂಬ ದೇವಿಯ ಜಾತ್ರಾ ಮಹೋತ್ಸವದ ಪ್ರಯುಕ್ತ ಆಗಮಿಸುವ ಭಕ್ತಾದಿಗಳು ಹಾಗೂ ಪ್ರವಾಸಿಗರ ಅನುಕೂಲಕ್ಕಾಗಿ, ಆಲೂರು ತಾಲೂಕಿನ ಪ್ರೇಕ್ಷಣೀಯ ಸ್ಥಳಗಳನ್ನು ರಾಜ್ಯ ಪ್ರವಾಸೋದ್ಯಮ ಇಲಾಖೆಯ ಪ್ಯಾಕೇಜ್ ಪ್ರವಾಸದ ಪಟ್ಟಿಗೆ ಸೇರಿಸಲಾಗಿದೆ.

ಹಾಸನಾಂಬ ಜಾತ್ರಾ ಮಹೋತ್ಸವದ ಹಿನ್ನೆಲೆ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ಸಂಯುಕ್ತವಾಗಿ ರೂಪಿಸಿರುವ ವಿಶೇಷ ಪ್ರವಾಸ ಮಾರ್ಗದಲ್ಲಿ ಈ ಬಾರಿ ಆಲೂರು ತಾಲೂಕಿನ ಪ್ರಮುಖ ತಾಣಗಳಾದ ? ವಾಟೆಹೊಳೆ ಜಲಾಶಯ, ಹಾಸನಾಂಬೆಯ ಸಹೋದರಿ ನೆಲೆಯಾದ ಕೆಂಚಮ್ಮನವರ ಕೆ.ಹೊಸಕೋಟೆ ದೇವಾಲಯ, ಪಾಳ್ಯದ ಲಕ್ಷ್ಮಿ ಜನಾರ್ಧನ ದೇವಸ್ಥಾನ ಸೇರಿದಂತೆ ಹಲವು ಧಾರ್ಮಿಕ ಹಾಗೂ ನೈಸರ್ಗಿಕ ಸೌಂದರ್ಯಮಯ ಸ್ಥಳಗಳು ಸ್ಥಾನ ಪಡೆದಿವೆ.



ಶಾಸಕರಾದ ಸಿಮೆಂಟ್ ಮಂಜು ಅವರು ಈ ಸ್ಥಳಗಳನ್ನು ಪ್ರವಾಸ ಪ್ಯಾಕೇಜ್‌ನಲ್ಲಿ ಸೇರಿಸುವಂತೆ ರಾಜ್ಯ ಪ್ರವಾಸೋದ್ಯಮ ಇಲಾಖೆಗೆ ಮನವಿ ಮಾಡಿದ್ದು, ಇದೀಗ ಅದು ಅನುಷ್ಠಾನಗೊಂಡಿದೆ.

ಜಿಜಿಜಿಲ್ಲೆಗೆ ಆಗಮಿಸುವ ಭಕ್ತಾದಿಗಳು ಹಾಸನಾಂಬೆಯ ದರ್ಶನದ ಜೊತೆಗೆ ಆಲೂರು ತಾಲೂಕಿನ ಶ್ರೀಮಂತ ನೈಸರ್ಗಿಕ ಸೌಂದರ್ಯ ಮತ್ತು ಪೌರಾಣಿಕ ದೇವಾಲಯಗಳ ಅನುಭವ ಪಡೆಯುವಂತಾಗಬೇಕು ಎಂಬುದು ನಮ್ಮ ಉದ್ದೇಶ,ಟಿಟಿ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದ್ದಾರೆ.

ಈ ಕ್ರಮದಿಂದ ಜಿಲ್ಲೆಯ ಪ್ರವಾಸೋದ್ಯಮ ವಲಯಕ್ಕೆ ಹೊಸ ಚೈತನ್ಯ ಲಭಿಸುವ ನಿರೀಕ್ಷೆ ವ್ಯಕ್ತವಾಗಿದೆ

## ಹಾಸನಾಂಬೆ ದೇವಿ ಒಡವೆ ರವಾನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವರ್ಷಕ್ಕೊಮ್ಮೆಯಷ್ಟೇ ದರ್ಶನ ಭಾಗ್ಯ ಕರುಣಿಸುವ ನಗರದ ಅಧಿದೇವತೆ ಹಾಸನಾಂಬೆಯ ಈ ಬಾರಿಯ ಜಾತ್ರಾ ಮಹೋತ್ಸವಕ್ಕೆ ದಿನಗಣನೆ ಶುರುವಾಗಿದೆ.

ಅ.9 ರಿಂದ ಅ.23 ರವರೆಗೆ ಹಾಸನಾಂಬ ದೇವಿ ಜಾತ್ರಾ ಮಹೋತ್ಸವ ಜರುಗಲಿದ್ದು, ಆಶ್ವೀಜಮಾಸದ ಮೊದಲ ಗುರುವಾರ ಮಧ್ಯಾಹ್ನ12.30 ರ ನಂತರ ದೇವಿಯ ಗರ್ಭಗುಡಿ ಬಾಗಿಲು ಶಾಸ್ತ್ರೋಕ್ತವಾಗಿ ತೆರಲಿಯಲಿದೆ. ಈ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತಾ ಕಾರ್ಯಗಳು ಬಹುತೇಕ ಅಂತಿಮ ಹಂತಕ್ಕೆ ಬಂದಿದ್ದು, ಸೋಮವಾರ ಜಿಲ್ಲಾ ಖಜಾನೆಯಲ್ಲಿದ್ದ ದೇವಿಯ ಆಭರಣಗಳನ್ನು ಸಂಪ್ರದಾಯ ಬದ್ಧವಾಗಿ ಹಾಗೂ ಪೊಲೀಸ್ ಬಿಗಿ ಭದ್ರತೆಯ ನಡುವೆ ದೇವಾಲಯದ ಪ್ರಧಾನ ಅರ್ಚಕರ

ಮನೆಗೆ ಕೊಂಡೊಯ್ಯಲಾಗಿದೆ. ಸಾಲಗಾಮೆ ರಸ್ತೆಯಲ್ಲಿರುವ ಜಿಲ್ಲಾ ಖಜಾನೆಯಿಂದ ದೇವಿಯ ಒಡವೆಗಳನ್ನು



ರವಾನೆ ಮಾಡಲಾಯಿತು. ಒಡವೆಗಳಿದ್ದ ಪೆಟ್ಟಿಗೆಗಳಿಗೆ ತಹಸೀಲ್ದಾರ್ ಗೀತಾ ಹಾಗೂ ಇತರರು ವಿಶೇಷ ಪೂಜೆ ಸಲ್ಲಿಸಿದರು.

ನಂತರ ಮಂಗಳವಾದ್ಯಗಳೊಂದಿಗೆ ಒಡವೆಗಳನ್ನು ಮೆರವಣಿಗೆಯಲ್ಲಿ ಹಾಸನಾಂಬ ದೇವಾಲಯಕ್ಕೆ ಪ್ರಧಾನ ಅರ್ಚಕ ನಾಗರಾಜ್ ನೇತೃತ್ವದಲ್ಲಿ ಅರ್ಚಕರು ಕೊಂಡೊಯ್ದರು.

ಬೆಳ್ಳಿ ರಥದಲ್ಲಿ ಸಾಗಿದ ಒಡವೆಗಳ ಮೆರವಣಿಗೆಯನ್ನು ಕಣ್ತುಂಬಿಕೊಂಡ ಭಕ್ತರು, ಕೈಮುಗಿದು ಒಳಿತು ಮಾಡು ಹಾಸನಾಂಬೆ ತಾಯೆ ಎಂದು ಬೇಡಿಕೊಂಡರು.

ಈ ಒಡವೆಗಳನ್ನು ಅ.9 ರಂದು ಗರ್ಭಗುಡಿಯ ಬಾಗಿಲು ತೆರೆದ ನಂತರ ಅಂದು ಇಡೀ ಗರ್ಭಗುಡಿಯನ್ನು ಸ್ವಚ್ಛಗೊಳಿಸಿ, ಮಹಾ ಮಂಗಳಾರತಿ ಮಾಡಿದ ನಂತರ ದೇವಿಗೆ ಆಭರಣ ಧಾರಣೆ ನಡೆಯಲಿದೆ. ನಂತರ ಆಭರಣ ಭೂಷಿತೆ ದೇವಿಯನ್ನು ಭಕ್ತರು ಕಣ್ತುಂಬಿಕೊಳ್ಳಬಹುದಾಗಿದೆ.

ಈ ಬಾರಿ ಹಾಸನಾಂಬೆ ದರ್ಶನ ಹಾಗೂ ನೂಕು ನುಗ್ಗಲು ತಪ್ಪಿಸಲು ವಾಟ್ಸಾಪ್ ಸೇರಿದಂತೆ ವಿವಿಧ ರೀತಿಯ ಅತ್ಯಾಧುನಿಕ ವ್ಯವಸ್ಥೆ ಮಾಡಲಾಗಿದೆ.

## ಸುಪ್ರೀಂ ಸಿಜೆಐ ಮೇಲೆ ಶೂ ಎಸೆಯಲು ಯತ್ನಿಸಿದ ವಕೀಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಸದಿಲ್ಲಿ: ಭಾರತದ ಸರ್ವೋಚ್ಚ ನ್ಯಾಯಾಲಯ ಸೋಮವಾರ ಅನಿರೀಕ್ಷಿತ ಬೆಳವಣಿಗೆಯೊಂದಕ್ಕೆ ಸಾಕ್ಷಿಯಾಗಿದೆ. ವಕೀಲರೊಬ್ಬರು ಮುಖ್ಯ ನ್ಯಾಯಮೂರ್ತಿ (ಸಿಜೆಐ) ಬಿ.ಆರ್. ಗವಾಯಿ ಅವರ ಮೇಲೆಯೇ ಚಪ್ಪಲಿ ಎಸೆಯಲು ಯತ್ನಿಸಿದ ಘಟನೆ ನಡೆದಿದೆ. ಈ ವೇಳೆ ಸನಾತನ (ಧರ್ಮ)ಕ್ಕೆ ಆದ ಅವಮಾನವನ್ನು ಸಹಿಸುವುದಿಲ್ಲ ಎಂದು ಕೂಗಿದ ವಕೀಲನನ್ನು ಭದ್ರತಾ ಸಿಬ್ಬಂದಿ ತಕ್ಷಣವೇ ವಶಕ್ಕೆ ಪಡೆದು ಹೊರಗೆ ಕರೆದೊಯ್ದಿದ್ದಾರೆ.

ಅಷ್ಟಕ್ಕೂ ಕೋರ್ಟ್ ಹಾಲ್‌ನಲ್ಲಿ ನಡೆದದ್ದೇನು: ಸೋಮವಾರ ಬೆಳಗ್ಗಿನ ಅವಧಿಯಲ್ಲಿ ಸಿಜೆಐ ಬಿ.ಆರ್. ಗವಾಯಿ ನೇತೃತ್ವದ ನ್ಯಾಯಪೀಠವು ಪ್ರಕರಣಗಳ ವಿಚಾರಣೆ ನಡೆಸುತ್ತಿತ್ತು. ಈ ವೇಳೆ ಈ ಘಟನೆ ನಡೆದಿದೆ. ವಕೀಲ ಕಿಶೋರ್ ರಾಕೇಶ್ ಎಂಬವರು ನ್ಯಾಯಪೀಠದ ಸಮೀಪಕ್ಕೆ ಬಂದು ಶೂ ಕಳಚಿ ನ್ಯಾಯಮೂರ್ತಿಗಳತ್ತ ಎಸೆಯಲು



ಮುಂದಾದರು.

ಆದರೆ, ನ್ಯಾಯಾಲಯದಲ್ಲಿ ಹಾಜರಿದ್ದ ಭದ್ರತಾ ಸಿಬ್ಬಂದಿ ಸಮಯ ಪ್ರಜ್ಞೆಯಿಂದ ಮುಜುಗರದ ಘಟನೆ ತಪ್ಪಿದೆ. ತಕ್ಷಣವೇ ಕಾರ್ಯಪ್ರವೃತ್ತರಾದ ಭದ್ರತಾ ಸಿಬ್ಬಂದಿ ವಕೀಲ ಕಿಶೋರ್ ರಾಕೇಶ್‌ರನ್ನು ತಡೆದು, ಕೋರ್ಟ್ ಹಾಲ್‌ನಿಂದ ಹೊರಕ್ಕೆ ಎಳೆದೊಯ್ದರು. ಈ ವೇಳೆ ಆತ ಸನಾತನ ಕಾ ಅಪಮಾನ್ ನಹೀ ಸಹೇಂಗೆ ಎಂದು ಹಿಂದಿಯಲ್ಲಿ ಕೂಗುತ್ತಿರುವುದು ಕೇಳಿಬಂತು.

ವಿಚಲಿತರಾಗದ ಮುಖ್ಯ ನ್ಯಾಯಮೂರ್ತಿ: ವಿಶೇಷವೆಂದರೆ ಈ ಅನಿರೀಕ್ಷಿತ ಘಟನೆಯಿಂದ ಸಿಜೆಐ ಗವಾಯಿ ಅವರು ಸ್ವಲ್ಪವೂ ವಿಚಲಿತರಾಗಲಿಲ್ಲ. ಅಲ್ಲಿದ್ದ ಇತರ ವಕೀಲರನ್ನುದ್ದೇಶಿಸಿ ಮಾತನಾಡಿದ ಅವರು, ಇಂತಹ ವಿಚಾರಗಳಿಂದ ನಿಮ್ಮ ಗಮನ ಬೇರೆಡೆಗೆ ಹೋಗದಂತೆ ನೋಡಿಕೊಳ್ಳಿ. ನಾವು ವಿಚಲಿತರಾಗಿಲ್ಲ. ಇದೆಲ್ಲವೂ ನನ್ನ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಗಟ್ಟಿ ದನಿಯಲ್ಲಿ ಹೇಳುವ ಮೂಲಕ ನ್ಯಾಯಾಲಯದ ಕಲಾಪವನ್ನು ಮುಂದುವರಿಸಿದರು.

### ಏನಿದರ ಹಿನ್ನೆಲೆ

ಇತ್ತೀಚೆಗೆ ಖಜುರಾಹೊದಲ್ಲಿನ ಶಿರಚ್ಛೇದಗೊಂಡ ವಿಷ್ಣುವಿನ ವಿಗ್ರಹವನ್ನು ಪುನಃಸ್ಥಾಪಿಸುವ ಕುರಿತ ಪ್ರಕರಣವೊಂದರಲ್ಲಿ ಸಿಜೆಐ ಬಿ.ಆರ್. ಗವಾಯಿ ನೀಡಿದ್ದ ಹೇಳಿಕೆಯೇ ಈ ಘಟನೆಗೆ ಪ್ರಚೋದನೆ ನೀಡಿರಬಹುದು ಎಂದು ವಿಶ್ಲೇಷಿಸಲಾಗಿದೆ. ಆ ಪ್ರಕರಣವನ್ನು ವಜಾಗೊಳಿಸುವಾಗ, ನೀವು ವಿಷ್ಣುವಿನ ಪರಮ ಭಕ್ತ ಎಂದು ಹೇಳಿಕೊಳ್ಳುತ್ತೀರಿ. ಈಗ ಹೋಗಿ ದೇವರ ಬಳಿಯೇ ಪ್ರಾರ್ಥಿಸಿ, ಆ

ದೇವರೇ ಏನಾದರೂ ಮಾಡಲಿ ಎಂದು ಅರ್ಜಿದಾರರಿಗೆ ಮೌಖಿಕವಾಗಿ ಹೇಳಿದ್ದರು. ಅವರ ಈ ಹೇಳಿಕೆಯು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂಬ ಆರೋಪಗಳು ಕೇಳಿಬಂದಿದ್ದವು.

ಈ ವಿವಾದದ ನಂತರ, ಸಿಜೆಐ ಗವಾಯಿ ಅವರು ಸ್ಪಷ್ಟನೆಯನ್ನು ನೀಡಿ, ನಾನು ಎಲ್ಲಾ ಧರ್ಮಗಳನ್ನು ಗೌರವಿಸುತ್ತೇನೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರದ ಪರವಾಗಿ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಕೂಡ ಸಿಜೆಐ ಅವರನ್ನು ಬೆಂಬಲಿಸಿದ್ದರು.

## ಹೊಂಡದಲ್ಲಿ ಮುಳುಗಿ ಇಬ್ಬರು ಬಾಲಕರು ಸಾವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ : ನೀರಿನ ಹೊಂಡದಲ್ಲಿ ಮುಳುಗಿ ಇಬ್ಬರು ಬಾಲಕರು ಸಾವನ್ನಪ್ಪಿರುವ ಘಟನೆ ತಾಲೂಕಿನ ಹೊಸೂರು ಗ್ರಾಮದಲ್ಲಿ ನಡೆದಿದೆ.

ಪ್ರಣಯ್ (7), ನಿಶಾಂತ್ (5) ಮೃತ ಬಾಲಕರು. ಐಬಿಸಿ ಕಾಫಿ ಎಸ್ಟೇಟ್‌ನಲ್ಲಿರುವ ನೀರಿನ ಹೊಂಡದಲ್ಲಿ ಈ ದುರ್ಘಟನೆ ನಡೆದಿದ್ದು,

ಪೋಷಕರು ಎಂದಿನಂತೆ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಹೊಂಡದಲ್ಲಿ ಆಟವಾಡಲು ತೆರಳಿದ್ದಾಗ ದುರಂತ ಸಂಭವಿಸಿದೆ.

ಹೊಂಡ ಆಳವಾಗಿದ್ದರಿಂದ ನೀರಿಗೆ ಇಳಿದವರು ಮೇಲೆ ಬರಲಾಗದೆ ಅಲ್ಲೇ ಮುಳುಗಿ ಸಾವನ್ನಪ್ಪಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ನಗರಠಾಣೆ ಪೊಲೀಸರು ಹಾಗೂ ಅಗ್ನಿಶಾಮಕದಳದ ಸಿಬ್ಬಂದಿ ಬಾಲಕರ ಮೃತದೇಹಗಳನ್ನು ಹೊರ ತೆಗೆದಿದ್ದಾರೆ. ತುತ್ತಿನ ಚೀಲ ತುಂಬಿಸಿಕೊಳ್ಳಲು ಪೋಷಕರು ಕೂಲಿ ಕೆಲಸಕ್ಕೆ ಆಗಮಿಸಿದ್ದರು. ದಸರೆ ರಜೆ ಹಿನ್ನೆಲೆಯಲ್ಲಿ ಮಕ್ಕಳನ್ನೂ ಜೊತೆಯಲ್ಲಿ ಕರೆದುಕೊಂಡು ಹೋಗಿದ್ದರು. ಆದರೆ ಕೂಲಿ ಕೆಲಸ ಮುಗಿಯುವುದರೊಳಗೆ ನಡೆಯಬಾರದ ದುರಂತ ನಡೆದು ಹೋಗಿದೆ. ಈ ಸಂಬಂಧ ನಗರಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಲಿಂಗಾಯತ ಪ್ರತ್ಯೇಕ ಧರ್ಮ ಕೇಂದ್ರ ನಿರ್ಧರಿಸಬೇಕು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಮಧ್ಯ ಪ್ರದೇಶದ ಮೊದಲ ಕಡೆ ಮಕ್ಕಳ ಸಾವಿಗೆ ಕಾರಣವಾಗಿರುವ ಎರಡು ರೀತಿಯ ಕಾಫ್ ಸಿರಪ್ ಕರ್ನಾಟಕದಲ್ಲೂ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಇಲಾಖೆಯಿಂದ ಇಂದು ಮಾರ್ಗಸೂಚಿ ಬಿಡುಗಡೆ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾವ ರೀತಿ ಎಚ್ಚರಿಕೆ ವಹಿಸಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸುತ್ತಾರೆ. ಇದೇ ತರಹ ಬೇರೆ ಕಂಪನಿಗಳು ಕಾಫ್ ಸಿತಪ್ ತಯಾರಿಕೆ ಮಾಡಿದ್ರೆ ಅದರ ಮಾದರಿ ಸಂಗ್ರಹಣೆ ಮಾಡಿ ತಪಾಸಣೆ ಮಾಡಬೇಕು ಎಂದು ಸೂಚನೆ ಕೊಟ್ಟಿದ್ದೇನೆ ಎಂದರು. ಈಗಾಗಲೇ ಪ್ರಕ್ರಿಯೆ ಆರಂಭವಾಗಿದೆ. ಒಂದೆರಡು ದಿನದಲ್ಲಿ ಅದರ ರಿಪೋರ್ಟ್ ಬರುತ್ತೆ, ಎಚ್ಚರಿಕೆ ಕ್ರಮ ಕೈಗೊಳ್ಳುತ್ತಿದ್ದೇವೆ. ನಾವು ಬಂದ ಮೇಲೆ ನಮ್ಮ ಇಲಾಖೆಯನ್ನು ಚುರುಕು ಗೊಳಿಸಿದ್ದೇವೆ. ಸಾಕಷ್ಟು ತಪಾಸಣೆ ಮಾಡಿಸುತ್ತಿದ್ದೇವೆ.

ಕರ್ನಾಟಕ ಈಗ ಬಹಳ ಮುಂಚೂಣಿಯಲ್ಲಿದೆ ಎಂದರು. ಕೋಲ್ಡ್ ಸಿರಪ್ ದುರಂತ ಪ್ರಕರಣ ಹಿನ್ನೆಲೆ ನಮ್ಮ ರಾಜ್ಯದಲ್ಲೂ ಕ್ರಮ ವಹಿಸಲಾಗಿದೆ ಎಂದರು. ಅಲ್ಲಿನ ಕಾಫ್ ಸಿರಪ್ ನಮ್ಮ ರಾಜ್ಯದಲ್ಲಿ ಸರಬರಾಜಾಗಿಲ್ಲ. ಆದರೂ ಮುನ್ನೆಚ್ಚರಿಕೆ ಕ್ರಮವಾಗಿ ಇಂದೂ ಸಹ ಮಾರ್ಗಸೂಚಿ ಬಿಡುಗಡೆ ಮಾಡುತ್ತೇವೆ ಎಂದರು.

ಈ ಹಿಂದೆ ಆರೋಗ್ಯ ಸುರಕ್ಷತೆ ಬಗ್ಗೆ ಯಾರೂ ಗಮನ ಹರಿಸಿರಲಿಲ್ಲ. ನಮ್ಮ ಸರ್ಕಾರ ಬಂದ ಬಳಿಕ ಅಹಾರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಜನರಿಗೆ ಆಹಾರ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಮಿನರಲ್ ವಾಟರ್ ತಯಾರಿಕೆ ಸಂಬಂಧ ಮತ್ತೊಂದು ಸುತ್ತಿನ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುತ್ತೇವೆ ಎಂದರು.

ಔಷಧ ವಿಚಾರದಲ್ಲಿ ಪಾರದರ್ಶಕತೆ ತರುವ ಅವಶ್ಯಕತೆ ಇದೆ ಎಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದೆ, ಈ ವಿಚಾರದಲ್ಲಿ ಬೇರೆ ಬೇರೆ ರಾಜ್ಯಗಳ ಜೊತೆ ಮಾಹಿತಿ ಹಂಚಿ ಕೊಳ್ಳಬೇಕಾಗುತ್ತದೆ. ಔಷಧಿ ತಯಾರಿಕೆ ಮಾಡುವವರು ಒಂದು ಕಡೆ ಇರ್ತಾರೆ, ಸರಬರಾಜು ಮಾಡುವವರು ಮತ್ತೊಂದು

ಕಡೆ ಇರ್ತಾರೆ, ಕರ್ನಾಟಕದಲ್ಲಿ ಮಾದರಿ ಸರಿ ಇಲ್ಲ ಎಂದು ಗೊತ್ತಾದಾಗ, ಅದು ಇಡೀ ದೇಶಕ್ಕೆ ಗೊತ್ತಾಗಬೇಕು ಎಂದು ನುಡಿದರು. ರಾಜ್ಯದಲ್ಲಿ ಹೊಸದಾಗಿ 1800 ವೈದ್ಯರ ನೇಮಕಾತಿ ಮಾಡಲಾಗಿದೆ, ಪಿಜಿ ವೈದ್ಯರ ನೇಮಕಾತಿಗೂ ಕ್ರಮ ವಹಿಸಲಾಗಿದೆ ಎಂದು ಇದೇ ವೇಳೆ ತಿಳಿಸಿದರು.

ಹೆಚ್ಚು ಪ್ರಶ್ನೆ ಸಮರ್ಥನೆ: ರಾಜ್ಯದಲ್ಲಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ವೇಳೆ ಹೆಚ್ಚು ಪ್ರಶ್ನೆ ಸಂಬಂಧ ಡಿಸಿಎಂ ಡಿ.ಕೆ.ಶಿವಕುಮಾರ್ ಆಕ್ಷೇಪ ವಿಚಾರವಾಗಿ, ನಾನೂ ಕೂಡ ಸಮೀಕ್ಷೆಯಲ್ಲಿ ಭಾಗಿಯಾಗಿದ್ದೇನೆ.

ಪ್ರಶ್ನೆಗಳನ್ನು ಸರಿಯಾಗಿ ಕೇಳಿದಾಗ ಮಾತ್ರ ಸರಿಯಾದ ಮಾಹಿತಿ ಸಿಗಲು ಸಾಧ್ಯ. ಕೆಲವು ಪ್ರಶ್ನೆಗಳು ಹಾಗೆ ಅನ್ನಿಸಬಹುದು. ಆದರೆ ಯಾರಿಗೆ ಮೀಸಲಾತಿ ಸಿಕ್ಕಿದೆ, ಸರ್ಕಾರದ ಸೌಲಭ್ಯ ಸಿಕ್ಕಿದೆ ಎನ್ನುವುದು ಮುಖ್ಯ, ಹಾಗಾಗಿ ಎಲ್ಲಾ ರೀತಿಯ ಪ್ರಶ್ನೆಗಳು ಅನಿವಾರ್ಯ ಎಂದು ಹೆಚ್ಚು ಪ್ರಶ್ನೆ ಅಳವಡಿಸಿರುವುದನ್ನು ಸಮರ್ಥಿಸಿಕೊಂಡರು.

ಚರ್ಚೆ ನಡೆದಿಲ್ಲ: ಸಿಎಂ ಬದಲಾವಣೆ, ಬಸವರಾಜ ರಾಯರೆಡ್ಡಿ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಚಿವರು, ಬಸವರಾಜ ರಾಯರೆಡ್ಡಿ ತರಹ ಅನೇಕರು ಆಕಾಂಕ್ಷಿಗಳಿದ್ದಾರೆ. ನಾನೂ ಆಕಾಂಕ್ಷಿ ಎನ್ನಬಹುದು. ಆದರೆ ಹೈಕಮಾಂಡ್ ತೀರ್ಮಾನ ಅಂತಿಮ ಎಂದರು.

### ಕೇಂದ್ರ ನಿರ್ಧರಿಸಬೇಕು ಲಿಂಗಾಯಿತ ಪ್ರತ್ಯೇಕ ಧರ್ಮ

ರಚನೆ ವಿಚಾರ ಕುರಿತ ಸಿಎಂ ಹೇಳಿಕೆಗೆ ಇದು ಆ ಸಮಾಜಕ್ಕೆ ಬಿಟ್ಟ ವಿಷಯ, ನಾನು ಆ ಸಮಾಜದ ಪ್ರತಿನಿಧಿಯಲ್ಲ. ಅದು ಅವರ ಬೇಡಿಕೆ, ಈ ಹಿಂದೆ ಅವರೇ ನಮ್ಮದು ಪ್ರತ್ಯೇಕ ಧರ್ಮ ಎಂದು ಹೇಳಿಕೊಂಡಿದ್ದಾರೆ, ಒಂದು ಗುಂಪು ಆ ರೀತಿ ಹೇಳುತ್ತಿದೆ, ಮತ್ತೊಂದು ಗುಂಪು ನಾವು ವೀರಶೈವ-ಲಿಂಗಾಯಿತರು ಹಿಂದೂ ಧರ್ಮದ ಅಡಿಯಲ್ಲಿ ಬರ್ತೀವಿ ಅಂಥ ಹೇಳುತ್ತಿದ್ದಾರೆ.ಅವರ ಬೇಡಿಕೆ ಆಧಾರದ ಮೇಲೆ ಸಿಎಂ ಕೇಂದ್ರ ಸರ್ಕಾರಕ್ಕೆ ಕಳುಹಿಸಿದ್ದರು. ನಿನ್ನೆಯೂ ಅನೇಕ ಮಠಾಧೀಶಕರು ನಮ್ಮದು ಲಿಂಗಾಯಿತ ಧರ್ಮ ಎಂದು ಹೇಳಿಕೊಂಡಿದ್ದಾರೆ. ಮುಂದೆ ಕೇಂದ್ರ ಸರ್ಕಾರ ತೀರ್ಮಾನ ಮಾಡಬೇಕಷ್ಟೆ ಎಂದು ಉತ್ತರಿಸಿದರು.

ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಇದ್ದಾರೆ.ಹೈಕಮಾಂಡ್ ತೀರ್ಮಾನದಂತೆ ಸರ್ಕಾರ ನಡೆಯುತ್ತೆ. ಸಿಎಂ ಬದಲಾವಣೆ ಪ್ರಶ್ನೆಯೇ ಉದ್ಭವ ಆಗುವುದಿಲ್ಲ, ರಾಷ್ಟ್ರಮಟ್ಟದಲ್ಲೂ ಈ ಬಗ್ಗೆ ಚರ್ಚೆಯೇ ಆಗಿಲ್ಲ ಎಂದು ಸ್ಪಷ್ಟಪಡಿಸಿದರು. ಸಿಎಂ ಇದ್ದಾಗ ಮತ್ತೊಬ್ಬರ ಬಗ್ಗೆ ಚರ್ಚೆ ಅಪ್ರಸ್ತುತ ಎಂದರು.

ಸಮಸ್ಯೆ ಆಗಲ್ಲ: ಮೆಟ್ರೋ ಸ್ಟೇಷನ್ ಗೆ ಬಸವಣ್ಣ ಅವರ ಹೆಸರಿಡಬೇಕೆಂಬ ಸಿಎಂ ಹೇಳಿಕೆಯನ್ನು ಬೆಂಬಲಿಸಿದ ಸಚಿವರು, ಬಸವಣ್ಣ ಅವರ ಹೆಸರಿಡಬೇಕು.ಬಸವಣ್ಣ ಅವರ ಸಿದ್ಧಾಂತಗಳು ಲಿಂಗಾಯತರಿಗೆ ಮಾತ್ರವಲ್ಲ, ಬಸವ ತತ್ವ ಅನುಕರಣೆ ಮಾಡಲು ಲಿಂಗಾಯಿತ, ವೀರಶೈವದವರೇ ಆಗಬೇಕಿಲ್ಲ. ಪ್ರತಿಯೊಬ್ಬರು ಬಸವ ತತ್ವ ಪಾಲಿಸಬೇಕು, ಏಕೆಂದರೆ ಸಾಮಾಜಿಕ, ಸಮಾನತೆ, ವೈಜ್ಞಾನಿಕವಾಗಿ ಸಿದ್ಧಾಂತ ಹುಟ್ಟು ಹಾಕಿರುವವರು ಬಸವಣ್ಣ. ಎಲ್ಲರೂ ಬಸವಣ್ಣ ಅವರ ತತ್ವ ಪಾಲಿಸಿದ್ದರೆ ಸಮಾಜ ತುಂಬಾ ಸುಧಾರಣೆ ಆಗಿದೆ.ಅಂಥವರ ಹೆಸರನ್ನು ಒಂದು ಮೆಟ್ರೋ ಸ್ಟೇಷನ್‌ಗೆ ಇಡುವುದರಲ್ಲಿ ದೊಡ್ಡ ಸಮಸ್ಯೆ ಆಗಲ್ಲ. ಕೇಂದ್ರ ಸರ್ಕಾರ ಶೀಘ್ರ ಅನುಮೋದನೆ ನೀಡಲಿದೆ ಎಂದುಕೊಂಡಿದ್ದೇನೆ ಎಂದರು.

# ಕಾಂತಾರ-1 ಚಿತ್ರ ಟಿಕೆಟ್‌ಗಾಗಿ ಪರದಾಟ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರಿಷಭ್ ಶೆಟ್ಟಿ ನಿರ್ದೇಶನದ ಕಾಂತಾರ-1 ಚಿತ್ರದ ಕ್ರೇಜ್ ಸಕಲೇಶಪುರ ಪಟ್ಟಣದಲ್ಲೂ ತೀವ್ರತೆಯ ತುತ್ತ ತುದಿಗೆ ತಲುಪಿದ್ದು, ಟಿಕೆಟ್ ಸಿಗದೆ ಜನರು ಪರದಾಡುವಂತಾಗಿದೆ.

ಸೋಮವಾರ ಸಂಜೆ 4.30ರ ಶೋಗೆ ಟಿಕೆಟ್ ಪಡೆಯಲು ಪಟ್ಟಣದ ತೇಜಸ್ವಿ ಚಿತ್ರಮಂದಿರದ ಮುಂದೆ ನೂರಾರು ಜನರು ಸಾಲಿನಲ್ಲಿ ನಿಂತಿದ್ದರು.

ಅದರಲ್ಲೂ ಮಹಿಳೆಯರು, ಯುವಕರು, ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ದೊಡ್ಡ ಪ್ರಮಾಣದ ಅಭಿಮಾನಿಗಳು ಮಧ್ಯಾಹ್ನ 2.30ರಿಂದಲೇ ಚಿತ್ರಮಂದಿರದ ಮುಂದೆ ನಿಂತು ಟಿಕೆಟ್ ನಿರೀಕ್ಷಿಸುತ್ತಿದ್ದರು.

ಆದರೆ, ಚಿತ್ರಮಂದಿರದ ಸಿಬ್ಬಂದಿ ಬಾಲ್ಕನಿ ಟಿಕೆಟ್ ಫುಲ್ ಎಂದು ಬೋರ್ಡ್ ಹಾಕಿ, ಟಿಕೆಟ್ ನೀಡುವುದನ್ನು ನಿಲ್ಲಿಸಿದರು. ಇದರಿಂದ ಕೋಪಗೊಂಡ ಜನರು ಸಿಬ್ಬಂದಿಯನ್ನು ಪ್ರಶ್ನಿಸಿದಾಗ, ಒಬ್ಬ ವಿಐಪಿ ಎಲ್ಲ ಬಾಲ್ಕನಿ ಟಿಕೆಟ್‌ಗಳನ್ನು ಬುಕ್ ಮಾಡಿದ್ದಾರೆ ಎಂಬ ಸಮಜಾಯಿಷಿ ನೀಡಲಾಗಿದೆ ಎಂಬ ಆರೋಪಗಳು ಕೇಳಿಬಂದಿವೆ.

ಇದೇ ವೇಳೆ, ಕೆಲವರು ಆಐಆನ್‌ಲೈನ್‌ನಲ್ಲಿ ಬುಕ್ಕಿಂಗ್ ಮಾಡಿದ್ದಾರೆಟಟ ಎಂಬ ಸಿಬ್ಬಂದಿಯ ಹೇಳಿಕೆಗೆ ವಿರೋಧ ವ್ಯಕ್ತಪಡಿಸಿದ್ದು, ತೇಜಸ್ವಿ ಚಿತ್ರಮಂದಿರದಲ್ಲಿ ಆನ್ ಲೈನ್ ಬುಕ್ಕಿಂಗ್ ಸೌಲಭ್ಯವೇ ಇಲ್ಲ ಎಂದು ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಚಿತ್ರದ ಕ್ರೇಜ್‌ನ ಪರಿಣಾಮವಾಗಿ ಪೋಲಿಸರು ಸ್ಥಳಕ್ಕೆ ಭೇಟಿ ನೀಡಿ ಜನರನ್ನು ಶಾಂತಗೊಳಿಸಿದರು. ಸಕಲೇಶಪುರ ಪಟ್ಟಣದಲ್ಲಿ ಕಾಂತಾರ-1 ಚಿತ್ರದ ಹೌಸ್‌ಫುಲ್ ಶೋಗಳು ಮುಂದುವರಿದಿದ್ದು, ಮುಂದಿನ ದಿನಗಳಲ್ಲೂ ಟಿಕೆಟ್‌ಗಾಗಿ ಪರದಾಟ ಮುಂದುವರಿಯುವ ಸಾಧ್ಯತೆ ಇದೆ.

# ಆರೋಗ್ಯ ಶಿಬಿರ ಕಬಡ್ಡಿ ಪಂದ್ಯಾವಳಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ ಗೋಪಾಲಸ್ವಾಮಿ ಅವರ 55ನೇ ಹುಟ್ಟು ಹಬ್ಬ ಹಿನ್ನೆಲೆಯಲ್ಲಿ ಇಂದು ಬೃಹತ್ ಅರೋಗ್ಯ ಮೇಳ ಹಾಗೂ ಕಬಡ್ಡಿ ಪಂದ್ಯಾವಳಿ ಆಯೋಜನೆ ಮಾಡಲಾಗಿತ್ತು.

ಪಟ್ಟಣದ ಗಣಪತಿ ಪೆಂಡಾಲ್‌ನಲ್ಲಿ ನಡೆದ ಆರೋಗ್ಯ ಮೇಳಕ್ಕೆ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಿದರು.

ಸ್ಥಳೀಯರು ಹಾಗೂ ತಾಲೂಕಿನ ವಿವಿಧೆಡೆಗಳಿಂದ ಆಗಮಿಸಿದ್ದ ಜನರು ಆರೋಗ್ಯ ತಪಾಸಣೆ ಮಾಡಿಸಿಕೊಂಡು, ತಮಗಿರುವ ಆರೋಗ್ಯ ಸಮಸ್ಯೆ ಬಗ್ಗೆ ವೈದ್ಯರಿಂದ ಪೂರಕ ಸಲಹೆ ಸೂಚನೆ ಪಡೆದುಕೊಂಡರು.

ಬಂದವರಿಗೆಲ್ಲ ಲಘು ಉಪಹಾರದ ವ್ಯವಸ್ಥೆ ಸಹ ಮಾಡಲಾಗಿತ್ತು.

ಇದೇ ವೇಳೆ ರಾಷ್ಟ್ರ ಮಟ್ಟದ ಕಬಡ್ಡಿ ಪಂದ್ಯಾವಳಿಯನ್ನೂ ಗೋಪಾಲಸ್ವಾಮಿ ಅವರ ಹುಟ್ಟು ಹಬ್ಬ ಹಿನ್ನೆಲೆಯಲ್ಲಿ ಆಯೋಜನೆ ಮಾಡಲಾಗಿತ್ತು. ಕಬಡ್ಡಿ ಪಂದ್ಯಾವಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾಗ ಕೆ.ವಿ ಪ್ರಭಾಕರ್ ಚಾಲನೆ ನೀಡಿದರು.

ತಮಿಳುನಾಡು, ಆಂಧ್ರ ಪ್ರದೇಶ, ಕೇರಳ ಸೇರಿದಂತೆ ವಿವಿಧ ರಾಜ್ಯಗಳ 16 ತಂಡಗಳು ಪಂದ್ಯಾವಳಿಯಲ್ಲಿ ಭಾಗಿಯಾಗಿವೆ. ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಎರಡು ದಿನಗಳ ಕಾಲ ಪಂದ್ಯಾವಳಿ ನಡೆಯಲಿದ್ದು, ಗೆಲುವಿಗಾಗಿ 16 ತಂಡಗಳ ಆಟಗಾರರೂ ಪರಸ್ಪರ ಸೆಣೆಸಾಟ ನಡೆಸಲಿದ್ದಾರೆ.

ಈ ಸಂದರ್ಭದಲ್ಲಿ ಬೆಂಗಳೂರಿನ ರಾಜರಾಜೇಶ್ವರಿ ನಗರದ

ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಕುಸುಮ, ಬಿಗ್ ಬಾಸ್ ಸ್ಪರ್ಧಿ ಐಶ್ವರ್ಯ ಸಿಂಧೋಗಿ ಸೇರಿ ಹಲವರಿದ್ದರು. ಈ ನೆರೆದಿದ್ದ ಸಾವಿರಾರು ಮಂದಿ ಕ್ರೀಡಾ ಪ್ರೇಮಿಗಳು ಪಂದ್ಯಾವಳಿಯ ರೋಚಕ ಕ್ಷಣಗಳನ್ನು ಕಣ್ತುಂಬಿಕೊಂಡು ಆನಂದಿಸಿದರು.

ಈ ಸಂದರ್ಭದಲ್ಲಿ ಸಂಸದ ಶ್ರೇಯಸ್ ಪಟೇಲ್, ಮಾಜಿ

ಎಂಎಲ್‌ಸಿ ಹಾಗೂ ಕೆಡಿಪಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಕಾಂಗ್ರೆಸ್ ಮುಖಂಡರಾದ ಹೆಚ್.ಕೆ.ಮಹೇಶ್, ಅಣತಿ ಆನಂದ್ ಹಾಗೂ ಸ್ಥಳೀಯ ಮುಖಂಡರು ಹಾಜರಿದ್ದರು. ಹಾಸನ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಅವರೂ ಆರೋಗ್ಯ ಶಿಬಿರದಲ್ಲಿ ಭಾಗಿಯಾಗಿ ಶುಭಾಶೀರ್ವಾದ ನೀಡಿದರು.

# ಹಾಸನ: 4.33 ಲಕ್ಷ ಮನೆ ಸಮೀಕ್ಷೆ ಪೂರ್ಣ

## ಜಿಲ್ಲೆಯಲ್ಲಿ ಇನ್ನೂ 95,068 ಮನೆ ಬಾಕಿ: ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಹಾಸನ: ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ನಾಳೆ ಕಡೆಯ ದಿನವಾಗಿದೆ.

ಜಿಲ್ಲೆಯಲ್ಲೂ ಸೆ.22 ರಂದು ಸಮೀಕ್ಷೆ ಆರಂಭವಾಗಿದ್ದು, ಜಿಲ್ಲೆಯ ಎಂಟೂ ತಾಲೂಕುಗಳ ವ್ಯಾಪ್ತಿಯ 5,28,679 ಮನೆಗಳಲ್ಲಿ ಈವರೆಗೆ 4,33,611 ಮನೆಗಳ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆ. ಇನ್ನೂ 95,068 ಮನೆಗಳ ಸರ್ವೆ ಕೆಲಸ ಬಾಕಿ ಇದೆ.

ಸಮೀಕ್ಷೆಗೆ ಕೆಲವೇ ಗಂಟೆ ಅಂದರೆ ಅ.7 ರಂದು ಕೊನೆಯ ದಿನಾಂಕವಾಗಿದ್ದು, ಈವರೆಗೂ ಮನೆಗಳ ಸಮೀಕ್ಷೆ ಆಗದೇ ಇದ್ದಲ್ಲಿ ಕೆಳಕಂಡ ಅಧಿಕಾರಿಗಳು ಅಥವಾ ಸ್ವಯಂ Online Website: https://kscbcselfdeclaration.karnataka.gov.in ಸಂಪರ್ಕಿಸುವ ಮೂಲಕ ಮೂಲಕ ಸಮೀಕ್ಷೆ ಪೂರ್ಣಕ್ಕೆ ಸಹಕರಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕುಮಾರ್ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.



ಮಹಾನಗರ ಪಾಲಿಕೆ ಇರುವ ಹಾಸನ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲೇ ಅತಿ ಹೆಚ್ಚು ಮನೆಗಳಿವೆ. ತಾಲೂಕಿನ ಒಟ್ಟು ಮನೆಗಳ ಸಂಖ್ಯೆ 1,46,006 ಇದ್ದು, 1,05,762 ಮನೆಗಳ ಸಮೀಕ್ಷೆ ಮುಗಿದಿದ್ದು, 40,244 ಮನೆಗಳ ಸಮೀಕ್ಷೆ ಬಾಕಿ ಇದೆ.




ತಾಲೂಕುವಾರು ವಿವರ: ಆಲೂರು: ಒಟ್ಟು 22,989 ಮನೆಗಳ ಪೈಕಿ 21,064 ಮನೆಗಳ ಸಮೀಪ್ಷೆ ಪೂರ್ಣಗೊಂಡಿದ್ದು, 1925 ಮನೆಗಳು ಬಾಕಿ ಇವೆ. ಅರಕಲಗೂಡು: ತಾಲೂಕಿನ 55,579 ಮನೆಗಳಲ್ಲಿ 48, 395 ಮನೆಗಳ ಸಮೀಕ್ಷೆ ಮುಗಿದಿದ್ದು, 7184 ಮನೆ ಸಮೀಕ್ಷೆ ಕಾರ್ಯ ಬಾಕಿ ಇದೆ.

ಅರಸೀಕೆರೆ: ಒಟ್ಟು 86, 156 ಮನೆಗಳಲ್ಲಿ 73,844 ಮನೆಗಳ ಸಮೀಕ್ಷೆ ಮುಗಿದಿದ್ದು, 12,312 ಮನೆ ಬಾಕಿ ಇವೆ. ಬೇಲೂರು: 49,909 ಒಟ್ಟು ಮನೆಗಳಲ್ಲಿ 45,993 ಮನೆಗಳ ಸಮೀಕ್ಷೆ ಮುಗಿದು 3916 ಮನೆ ಬಾಕಿ ಇವೆ.

ಚನ್ನರಾಯಪಟ್ಟಣ: 84,159 ಒಟ್ಟು ಮನೆಗಳಲ್ಲಿ 68,192 ಮನೆಗಳ ಸಮೀಕ್ಷೆ ಪೂರ್ಣಗೊಂಡಿದ್ದು, 15,967 ಬಾಕಿ ಇವೆ.

ಹೊಳೆನರಸೀಪುರ: ಒಟ್ಟು 52,724 ಮನೆಗಳಲ್ಲಿ 44,002 ಹೌಸ್ ಸಮೀಕ್ಷೆ ಕೊನೆಗೊಂಡಿದ್ದು, 8,722 ಮನೆ ಬಾಕಿ ಇವೆ.

ಸಕಲೇಶಪುರ: 31,157 ಒಟ್ಟು ಮನೆಗಳಲ್ಲಿ 26,359 ಮನೆ ಸಮೀಕ್ಷೆ ಮುಗಿದು 4798 ಮನೆ ಬಾಕಿ ಉಳಿದಿವೆ.

ಜಿಲ್ಲಾದ್ಯಂತ ಒಟ್ಟು 5,28,679 ಮನೆಗಳಿದ್ದು, ಇವುಗಳಲ್ಲಿ 4,33,611 ಮನೆಗಳ ಸಮೀಕ್ಷೆ ಮುಗಿದಿದೆ. ಸಮೀಕ್ಷೆ ಮಾಡಲು ಬಾಕಿ ಇರುವ ಮನೆಗಳು 95068. ಸಮೀಕ್ಷೆ ಬಾಕಿ ಉಳಿದಿರುವವ ಮನೆ ಮಾಲೀಕರು ಅಥವಾ ಕುಟುಂಬದವರು ಆಲೂರು ತಾಲ್ಲೂಕು ಸಹಾಯವಾಣಿ ಸಂಖ್ಯೆ-9449665574, ಅರಕಲಗೂಡು-7019024647, ಅರಸೀಕೆರೆ-8618981820, ಬೇಲೂರು- 9535358837, ಚನ್ನರಾಯಪಟ್ಟಣ- 9448661732, ಹಾಸನ- 8951249726, ಹೊಳೆನರಸೀಪುರ- 9916155671, ಸಕಲೇಶಪುರ- 9449665574 ನಂಬರನ್ನು ಸಂಪರ್ಕಿಸುವಂತೆ ಅವರು ಕೋರಿದ್ದಾರೆ.

### ಹಾಸನ ಜಿಲ್ಲಾದ್ಯಂತ ಸಮೀಕ್ಷೆಯ ಸ್ಥಿತಿ-ಗತಿ

| ತಾಲೂಕು | ಒಟ್ಟುಮನೆ | ಮುಗಿದಿರುವುದು | ಬಾಕಿ |
|---|---|---|---|
| ಆಲೂರು | 22,989 | 21,064 | 1925 |
| ಅರಕಲಗೂಡು | 55,579 | 48,395 | 7184 |
| ಅರಸೀಕೆರೆ | 86,156 | 73,844 | 12,312 |
| ಬೇಲೂರು | 49,909 | 45,993 | 3916 |
| ಚ.ರಾ.ಪಟ್ಟಣ | 84,159 | 68,192 | 15,067 |
| ಹಾಸನ | 1,46,006 | 1,05,762 | 40,244 |
| ಹೊ.ನ.ಪುರ | 52,724 | 44,002 | 8722 |
| ಸಕಲೇಶಪುರ | 31,157 | 26,359 | 4798 |
| | 5,28,679 | 4,33,611 | 95,068 |

# ಲಕ್ಷಾಂತರ ರೂ. ಮೌಲ್ಯದ ಸಿದ್ಧ ಉಡುಪು ಸುಟ್ಟು ಭಸ್ಮ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಪಟ್ಟಣದ ಹೃದಯಭಾಗ ಪುರಸಭೆ ಪಕ್ಕದಲ್ಲಿರುವ, ಪುರಸಭಾ ವಾಣಿಜ್ಯ ಸಂಕೀರ್ಣದ ವರ್ಣಿಕ ಗಾರ್ಮೆಂಟ್ಸ್ ಅಂಗಡಿ ಮಳಿಗೆಯಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡು ಲಕ್ಷಾಂತರ ರೂ. ಮೌಲ್ಯದ ಬಟ್ಟೆಗಳು ಸುಟ್ಟು ಬೂದಿಯಾಗಿರುವ ಘಟನೆ ನಡೆದಿದೆ.

ಕೋಟೆ ಮುಖ್ಯ ರಸ್ತೆಯ ವಕೀಲ ಗೋವಿಂದರಾಜು ಎಂಬುವವರಿಗೆ ಸೇರಿದ ಗಾರ್ಮೆಂಟ್ಸ್ ನಲ್ಲಿ ಶನಿವಾರ ತಡರಾತ್ರಿ ಈ ಅವಘಡ ನಡೆದಿದ್ದು, ದೀಪಾವಳಿ ಹಬ್ಬದ ಹಿನ್ನೆಲೆ ಮಾರಾಟ ಮಾಡಲು ತಂದಿದ್ದ ಬಟ್ಟೆಗಳು ಸಂಪೂರ್ಣ ಸುಟ್ಟುಹೋಗಿವೆ. ಲಕ್ಷಾಂತರ ರೂ.ಮೌಲ್ಯದ ಮೌಲ್ಯದ ರೆಡಿಮೇಡ್ ಸಿದ್ಧ ಉಡುಪು ಸುಟ್ಟು ಹೋಗಿವೆ ಎಂದು ಮಾಲೀಕರು ತಿಳಿಸಿದ್ದಾರೆ.

ಶನಿವಾರ ಎಂದಿನಂತೆ ಅಂಗಡಿ ಮಾಲೀಕ ರಾತ್ರಿವರೆಗೂ ವ್ಯವಹಾರ ಮುಗಿಸಿ ಮಳಿಗೆಗೆ ಬೀಗ ಹಾಕಿ ಮನೆಗೆ ಹೊರಟಿದ್ದರು.

ರಾತ್ರಿ 10.30 ರಿಂದ 11 ಗಂಟೆ ನಡುವೆ ಏಕಾಏಕಿ ಮಳಿಗೆಯಲ್ಲಿ ಬೆಂಕಿ ಕಾಣಿಸಿ ಕೊಂಡಿದೆ. ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆಯೇ ಇದನ್ನು ಗಮನಿಸಿದ ದಾರಿಹೋಕರು, ತಕ್ಷಣ ಅಗ್ನಿ ಶಾಮಕ ಠಾಣೆಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಆಗಮಿಸಿದ ಅಗ್ನಿ ಶಾಮಕ ಠಾಣೆ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿಯ ಜ್ವಾಲೆ ಕಂಡು ಮಳಿಗೆಯ ಶಟರ್ ತೆಗೆಸಿ ಬೆಂಕಿಯ ಜ್ವಾಲೆ ನಂದಿಸಲು ಹರಸಾಹಸ ಮಾಡಿದರು. ನಿರಂತರ ಕಾರ್ಯಾಚರಣೆ ಮಾಡಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಆದರೂ ಅಂಗಡಿಯಲ್ಲಿದ್ದ ಮಹಿಳೆಯರು ಮತ್ತು ಮಕ್ಕಳ ಉಡುಪು ಅಗ್ನಿಗಾಹುತಿಯಾಗಿವೆ. ನಗರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಕೆಯುಡಬ್ಲ್ಯೂಜೆ ಗ್ರಂಥಾಲಯ ಉದ್ಘಾಟನೆ

## ನಿರಂತರ ಪುಸ್ತಕಗಳ ಓದಿನ ಅಭಿರುಚಿಯಿಂದ ಜ್ಞಾನ ಸಂಪಾದನೆ ಸಾಧ್ಯ: ಜಿಲ್ಲಾಧಿಕಾರಿ ಜಗದೀಶ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಬೆಂಗಳೂರು: ಇಂದಿನ ಡಿಜಿಟಲ್ ಯುಗದಿಂದಾಗಿ ಪುಸ್ತಕ ಓದುವ ಹವ್ಯಾಸವು ದೂರವಾಗಿರುವುದು ವಿಷಾದಕರ. ಪತ್ರಕರ್ತರು ನಿರಂತರವಾಗಿ ಓದುವ ಹವ್ಯಾಸದಲ್ಲಿ ತೊಡಗಿಕೊಂಡರೆ ಮಾತ್ರ ಜ್ಞಾನ ಸಂಪಾದಿಸಿಕೊಂಡು, ವೃತ್ತಿ ಬದ್ಧತೆ ತೋರಿಸಲು ಸಾಧ್ಯ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ಅಭಿಪ್ರಾಯಪಟ್ಟರು.




ಕಂದಾಯ ಭವನದಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಕಚೇರಿಯಲ್ಲಿ ಸಂಘದ ಸದಸ್ಯರಿಗಾಗಿ ಸ್ಥಾಪಿಸಿರುವ ಗ್ರಂಥಾಲಯ ಸೌಲಭ್ಯವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಬಹುತೇಕ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಗಳೇ ರಾರಾಜಿಸುತ್ತವೆ. ಪತ್ರಕರ್ತರು ಸದಾ ವಸ್ತುನಿಷ್ಠ ವರದಿಗಳಿಗೆ ಗಮನ ನೀಡಿದರಷ್ಟೇ ಪತ್ರಿಕೋದ್ಯಮ ಮೌಲ್ಯ ಉನ್ನತಿಗೇರಲು ಸಾಧ್ಯ ಎಂದೂ ಅವರು ಹೇಳಿದರು.

ಜಿಲ್ಲಾಧಿಕಾರಿಯಾಗಿ ನಾನು ಬಂದ ಮೇಲೆ ಬೆಂಗಳೂರಿನಲ್ಲಿ ಸುಮಾರು 300 ಎಕರೆ ಅಕ್ರಮ ಒತ್ತುವರಿ ತೆರವು ಮಾಡಲಾಗಿದೆ. ಯಾವುದೇ ಸಂದರ್ಭಗಳಲ್ಲಿ ಯಾವುದೇ ಒತ್ತಡಕ್ಕೂ ಮಣಿಯದೆ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಲು ತನ್ನಿಂದ ಸಾಧ್ಯವಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಹಿರಿಯ ಪತ್ರಕರ್ತರಾದ ಕಂ.ಕ.ಮೂರ್ತಿ, ಪುಸ್ತಕಗಳು ಜ್ಞಾನದ ಭಂಡಾರವಾಗಿದ್ದು, ಪತ್ರಕರ್ತರು ಪುಸ್ತಕಗಳ ಓದಿನತ್ತ ಹೆಚ್ಚಿನ ಒಲವನ್ನು ತೋರಿಸಿದರೆ ಮಾತ್ರ ಪ್ರಬುದ್ಧರಾಗಲು ಸಾಧ್ಯ. ಸಾಹಿತ್ಯ ಕೃತಿಗಳು ಪತ್ರಕರ್ತರಿಗೆಂದೂ ಮಾರ್ಗದರ್ಶಿಯಾಗುತ್ತವೆ. ಇದನ್ನು ತಮ್ಮ ಬದುಕಿನಲ್ಲಿಯೂ ಅಳವಡಿಸಿಕೊಂಡಿದ್ದೇವೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಈಗಾಗಲೇ ನಮ್ಮ ಸಂಘವು ತನ್ನ ಸದಸ್ಯರಿಗೆ ಹಲವು ಸೌಲಭ್ಯಗಳನ್ನು ನೀಡುವಲ್ಲಿ ಯಶಸ್ವಿಯಾಗಿದೆ. ಆ ನಿಟ್ಟಿನಲ್ಲಿ ಇದೀಗ ಗ್ರಂಥಾಲಯವೂ ಕೂಡಾ ಸಹಕಾರಿಯಾಗಲಿ ಎನ್ನುವ ಉದ್ದೇಶದಿಂದ ಈ ಪ್ರಯತ್ನ ಮಾಡಲಾಗಿದೆ ಎಂದರು.

ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ, ಸಂಘದ ರಾಜ್ಯ ಉಪಾಧ್ಯಕ್ಷರುಗಳಾದ ಭವಾನಿ ಸಿಂಗ್ ಠಾಕೂರ್, ಅಜಮಾಡು ಕುಟ್ಟಪ್ಪ, ಪುಂಡಲೀಕ ಬಾಳೋಜಿ, ಕಾರ್ಯದರ್ಶಿಗಳಾದ ಮತ್ತೀಕೆರೆ ಜಯರಾಮ್, ಸೋಮಶೇಖರ ಕೆರೆಗೋಡು, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ ಮತ್ತು ಸಂಘದ ವಿವಿಧ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಇತಿಹಾಸದಲ್ಲಿ ಈ ದಿನ

## ಅಕ್ಟೋಬರ್-07

1571 ಲೆಪಾಂಟೊ ಕದನ : ಪೋಪ್ ಪಿಯಸ್ ಗಿ ರಚಿಸಿದ ದಕ್ಷಿಣ ಯುರೋಪಿಯನ್ ರಾಷ್ಟ್ರಗಳ ಪವಿತ್ರ ಲೀಗ್ ಪಶ್ಚಿಮ ಗ್ರೀಸ್‌ನಿಂದ ಗಮನಾರ್ಹ ನಷ್ಟದಲ್ಲಿ ಒಟ್ಟೋಮನ್ ನೌಕಾಪಡೆಯನ್ನು ನಾಶಪಡಿಸಿತು.

1737 ಭಾರತದ ಕಲ್ಕತ್ತಾದಲ್ಲಿ ಚಂಡಮಾರುತವು 40 ಅಡಿ ಎತ್ತರದ ಅಲೆಗಳನ್ನು ಉಂಟುಮಾಡಿತು, ಇದು 300,000 ಜನರನ್ನು ಕೊಂದಿದೆ ಎಂದು ನಂಬಲಾಗಿದೆ.

1763 ಗ್ರೇಟ್ ಬ್ರಿಟನ್‌ನ ಜಾರ್ಜ್ 1763 ರ ಘೋಷಣೆಯನ್ನು ಹೊರಡಿಸಿದನು, ಅಲ್ಲೆಘೆನಿಗಳ ಉತ್ತರ ಮತ್ತು ಪಶ್ಚಿಮದಲ್ಲಿರುವ ಉತ್ತರ ಅಮೆರಿಕಾದ ಭೂಮಿಯನ್ನು ಬಿಳಿಯರ ವಸಾಹತುಗಳಿಗೆ ಮುಚ್ಚಿದನು.

ರಾಯಲ್ ಡಚ್ ಏರ್ಲೈನ್ಸ್ , ಆಮ್ಸ್ಟರ್ಡ್ಯಾಮ್ನಲ್ಲಿ ಸ್ಥಾಪಿಸಲಾಯಿತು, ಇದು ವಿಶ್ವದ ಅತ್ಯಂತ ಹಳೆಯ ವಿಮಾನಯಾನ ಸಂಸ್ಥೆಗಳಲ್ಲಿ ಒಂದಾಗಿದೆ

2001 ರ ಅಫ್ಘಾನಿಸ್ತಾನದ ಮೇಲಿನ ಅಮೆರಿಕದ ಆಕ್ರಮಣವು ವಾಯುದಾಳಿ ಮತ್ತು ರಹಸ್ಯ ನೆಲದ ಕಾರ್ಯಾಚರಣೆಗಳೊಂದಿಗೆ ಪ್ರಾರಂಭವಾಗುತ್ತದೆ.

2023 ಹಮಾಸ್ ಗಾಜಾದಿಂದ ಇಸ್ರೇಲ್ ಮೇಲೆ ಪ್ರಮುಖ ವಾಯು ಮತ್ತು ನೆಲದ ದಾಳಿಯನ್ನು ನಡೆಸಿತು, ಸಾವಿರಕ್ಕೂ ಹೆಚ್ಚು ಜನರನ್ನು ಕೊಂದು ನೂರಾರು ಜನರನ್ನು ಒತ್ತೆಯಾಳುಗಳನ್ನಾಗಿ ಮಾಡಿತು, ಇದು ಪ್ರಧಾನಿ ಬೆಂಜಮಿನ್ ನೆತನ್ಯಾಹು ನಾವು ಯುದ್ಧದಲ್ಲಿದ್ದೇವೆ ಎಂದು ಘೋಷಿಸಲು ಪ್ರೇರೇಪಿಸಿತು

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248